# CIRCULAR

KARNATAKA EMPLOYERS' ASSOCIATION
KEA
60
DIAMOND JUBILEE YEAR
(1961 - 2021)

**Circular No - 016 / 2022**

Date: 05.02.2022

To
All Members of The Association

**OPTION TO RENEW TRADE LICENCE FROM 1 TO 5 YEARS FROM 2022-23**

The Chief Commissioner BBMP Bengaluru has vide Circular No. PR/P-259/2021-22 dated 01-02-2022 notified that the trade licence, which is being renewed every year, may be renewed from 1 to 5 five years effective from the financial year 2022-23. Trade Licence renewal fee may be paid online or through bank challan without penalty from 01.02.2022 to 28.02.2022. Thereafter a penalty of 25% is applicable for renewal between 01.03.2022 to 31.03.2022 and a penalty of 100% is applicable for renewal after 01.04.2022.

The entire renewal process is directed to be completed online.

A copy of the Circular No. PR/P-259/2021-22 Dated 01-02-2022 attached.

**For KARNATAKA EMPLOYERS' ASSOCIATION**
**Sd/-**
**[B.C. PRABHAKAR]**
**PRESIDENT**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರವರ ಕಛೇರಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್.ಚೌಕ, ಬೆಂಗಳೂರು-560002.

ಸಂಖ್ಯೆ : ಮು.ಆ.ಅ(ಸಾ.ಆ)/ಪಿಆರ್/ಪಿ-259/2021-22 ದಿನಾಂಕ : 01-02-2022

## ಸುತ್ತೋಲೆ

ವಿಷಯ : 2022-23 ನೇ ಸಾಲಿನ ಉದ್ದಿಮೆ ಪರವಾನಿಗೆಯ ನವೀಕರಣ ಬಗ್ಗೆ

ಉಲ್ಲೇಖ : ಆಯುಕ್ತರು/ಪಿಎಸ್‌ಆರ್(4)4778/2018-19, ದಿನಾಂಕ : 07-09-2018.

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ 2022-23 ನೇ ಸಾಲಿನ ಉದ್ದಿಮೆ ಪರವಾನಿಗೆ ನವೀಕರಣ ಕಾರ್ಯವನ್ನು ಈ ಕೆಳಕಂಡಂತೆ ಹಮ್ಮಿಕೊಳ್ಳಬಹುದಾಗಿರುತ್ತದೆ.

1. ಉದ್ದಿಮೆದಾರರ ಅನುಕೂಲಕ್ಕೆ ತಕ್ಕಂತೆ 1 ರಿಂದ 5 ಆರ್ಥಿಕ ವರ್ಷಗಳ ಅವಧಿಗೆ (ಏಪ್ರಿಲ್ ನಿಂದ ಮಾರ್ಚ್) ನವೀಕರಣ ಮಾಡಲು ಸೂಚಿಸಿದೆ.
2. ನವೀಕರಣ ಶುಲ್ಕವನ್ನು ಉದ್ದಿಮೆದಾರರು ಕೋರುವ ಆರ್ಥಿಕ ವರ್ಷಕ್ಕೆ ಮಿತಿಗೊಳಿಸಿ ಪಾವತಿಸಿಕೊಳ್ಳುವುದು.
3. ಕಳೆದ ಸಾಲಿನಂತೆ ಉದ್ದಿಮೆ ಪರವಾನಿಗೆ ಶುಲ್ಕವನ್ನು ಆನ್‌ಲೈನ್ ಮುಖಾಂತರ ಹಾಗೂ ಬ್ಯಾಂಕ್ ಚಲನ್ ಮೂಲಕ ಕೆನರಾ ಬ್ಯಾಂಕಿನಲ್ಲಿ ಪಾವತಿಸುವುದು.
4. ದಿನಾಂಕ : 01-02-2022 ರಿಂದ 28-02-2022ರವರೆಗೆ ದಂಡವಿಲ್ಲದೇ ಪರವಾನಿಗೆ ಶುಲ್ಕವನ್ನು ಪಾವತಿಸಿಕೊಳ್ಳುವುದು.
5. ದಿನಾಂಕ : 01-03-2022 ರಿಂದ 31-03-2022ರವರೆಗೆ ಪರವಾನಿಗೆ ನವೀಕರಣ ಶುಲ್ಕದ ಶೇಕಡಾ 25% ರಷ್ಟು ದಂಡ ಮೊತ್ತದೊಂದಿಗೆ ಪರವಾನಿಗೆ ಶುಲ್ಕವನ್ನು ಪಾವತಿಸಿಕೊಳ್ಳುವುದು.
6. ದಿನಾಂಕ : 01-04-2022 ರಿಂದ ಪರವಾನಿಗೆ ಶುಲ್ಕದ ಶೇಕಡಾ 100% ರಷ್ಟು ದಂಡದ ಮೊತ್ತದೊಂದಿಗೆ ಪರವಾನಿಗೆ ಶುಲ್ಕವನ್ನು ಪಾವತಿಸಿಕೊಳ್ಳುವುದು.
7. ಪರವಾನಿಗೆ ನವೀಕರಣ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್ ಮುಖಾಂತರವೇ ಮಾಡಲು ಸೂಚಿಸಿದೆ.

**ವಲಯ ವರ್ಗೀಕರಣ ನಿಯಮಾವಳಿಯಂತೆ :**

- ವಸತಿ ಪ್ರದೇಶದಲ್ಲಿ 40 ಅಡಿ ಅಗಲಕ್ಕಿಂತ ಕಡಿಮೆ ಇರುವ ರಸ್ತೆಗಳಲ್ಲಿ 2015ರ ನಂತರ ಪ್ರಾರಂಭವಾಗಿರುವ ಉದ್ದಿಮೆ ಪರವಾನಿಗೆಯನ್ನು ತಡೆಹಿಡಿದು ಹಿಂಬರಹ ನೀಡಿ ತಿರಸ್ಕರಿಸುವುದು.
- ವಸತಿ ಪ್ರದೇಶದಲ್ಲಿ 40 ಅಡಿ ಅಗಲಕ್ಕಿಂತ ಜಾಸ್ತಿಯಿರುವ ರಸ್ತೆಗಳಲ್ಲಿ 2015ರ ನಂತರ ಪ್ರಾರಂಭವಾಗಿರುವ ಉದ್ದಿಮೆಗಳನ್ನು ಮತ್ತು ನಿಗದಿಪಡಿಸಿರುವ ವಿಸ್ತೀರ್ಣಕ್ಕೆ ಸೀಮಿತಗೊಳಿಸಿ, ಇತರೆ ಉದ್ದಿಮೆಗಳ ಪರವಾನಿಗೆ ನವೀಕರಣವನ್ನು ತಡೆಹಿಡಿದು ಹಿಂಬರಹ ನೀಡಿ ತಿರಸ್ಕರಿಸುವುದು.

ಮು.ತಿ.ನೋ.

**ಕಟ್ಟಡ ನಿಯಮಾವಳಿಯಂತೆ :**

- ಉದ್ದಿಮೆಯು ಅನಧಿಕೃತವಾಗಿ ನಕ್ಷೆ ಉಲ್ಲಂಘನೆಯಾಗಿ ನಿರ್ಮಿಸಿರುವ ಕಟ್ಟಡಗಳಲ್ಲಿ ಪೂರ್ತಿ ಅಥವಾ ಭಾಗಶಃ ಬಳಸುತ್ತಿರುವ ಬಗ್ಗೆ ದೂರುಗಳಿದ್ದಲ್ಲಿ, ವಾಹನ ನಿಲುಗಡೆ ಪ್ರದೇಶದಲ್ಲಿ ಅಥವಾ ರೂಫ್ ಟಾಪ್‌ಗಳಲ್ಲಿ ನಡೆಸುತ್ತಿದ್ದಲ್ಲಿ ಪರವಾನಿಗೆ ನವೀಕರಣವನ್ನು ತಡೆಹಿಡಿದು ಹಿಂಬರಹ ನೀಡಿ ತಿರಸ್ಕರಿಸುವುದು.

**ಘನತ್ಯಾಜ್ಯ ಮತ್ತು ಸಾರ್ವಜನಿಕ ಆರೋಗ್ಯ ನಿಯಮಾವಳಿಯಂತೆ :**

- 10 ಕೆ.ಜಿ.ಗಿಂತ ಜಾಸ್ತಿ ತ್ಯಾಜ್ಯ ಉತ್ಪತ್ತಿ ಮಾಡುವ ಉದ್ದಿಮೆಗಳಿಂದ ಮೂಲ ಸ್ಥಳದಲ್ಲಿ ತ್ಯಾಜ್ಯ ಸಂಸ್ಕರಣೆ ಹಾಗೂ ವಿಲೇವಾರಿಗೆ ಸಂಬಂಧಿಸಿದ ದಾಖಲಾತಿಗಳನ್ನು ಪಡೆದು ಅಥವಾ ಇಟರಿಚಿಟಿಜಟಿಟಜಜ ಗಿಜಟಿಜಂಡಿಗೆ ನೀಡುತ್ತಿದ್ದ ಪಕ್ಷದಲ್ಲಿ ಎಲ್ಲಾ ವಿಧದ ತ್ಯಾಜ್ಯಗಳ ವಿಲೇವಾರಿಗೆ ಅವರೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆ ಪ್ರತಿಯನ್ನು ಪಡೆದು ನವೀಕರಿಸುವುದು.
- ಉಲ್ಲೇಖ ಪತ್ರದಂತೆ ಕಛೇರಿ ಆದೇಶವನ್ನು ಪಾಲಿಸುತ್ತಿರುವ ಬಗ್ಗೆ ಕಲ್ಯಾಣ ಮಂಟಪ ಉದ್ದಿಮೆದಾರರಿಂದ ಲಿಖಿತ ಹೇಳಿಕೆ ಪಡೆದು ಸದರಿ ಕಛೇರಿ ಆದೇಶವನ್ನು ಸ್ಥಳದಲ್ಲಿ ಪ್ರದರ್ಶಿಸಿರುವ ಛಾಯಾ ಚಿತ್ರವನ್ನು ಪಡೆದು ನವೀಕರಿಸುವುದು.
- ಹೋಟೆಲ್ / ರೆಸ್ಟೋರೆಂಟ್ ಮತ್ತು ಆಹಾರ ಸರಬರಾಜು ಮಾಡುವ ಉದ್ದಿಮೆಗಳು ಕಡ್ಡಾಯವಾಗಿ ಪ್ಲಾಸ್ಟಿಕ್ ನಿಷೇಧವನ್ನು ಪಾಲಿಸುವ ಕುರಿತು ಲಿಖಿತ ಹೇಳಿಕೆ ಪಡೆದುಕೊಳ್ಳುವುದು.
- ಉದ್ದಿಮೆ ಸ್ಥಳಗಳಲ್ಲಿ ಪ್ಲಾಸ್ಟಿಕ್ ನಿಷೇಧ ಬಗ್ಗೆ ಹಾಗೂ ಒಮ್ಮೆ ಬಳಸಿ ಬಿಸಾಡುವ ಸಾಮಗ್ರಿಗಳನ್ನು ಉಪಯೋಗಿಸದಂತೆ ಬಿತ್ತಿ ಪತ್ರಗಳನ್ನು ಪ್ರದರ್ಶಿಸುವುದು.
- ಉದ್ದಿಮೆ ಸ್ಥಳಗಳಲ್ಲಿ ಹಸಿ ಕಸಕ್ಕೆ (ಹಸಿರು ಬಣ್ಣ) ಮತ್ತು ಒಣ ಕಸಕ್ಕೆ (ನೀಲಿ ಬಣ್ಣ) ಪ್ರತ್ಯೇಕ ಕಸದ ಬುಟ್ಟಿಗಳನ್ನು ಇಟ್ಟುಕೊಂಡು ವೈಜ್ಞಾನಿಕವಾಗಿ ಅದನ್ನು ವಿಲೇವಾರಿ ಮಾಡುವುದು.

ಅದರಂತೆ ವಲಯ ಆರೋಗ್ಯಾಧಿಕಾರಿಗಳು, ಉಪ ಆರೋಗ್ಯಾಧಿಕಾರಿಗಳು, ಆರೋಗ್ಯ ವೈದ್ಯಾಧಿಕಾರಿಗಳು ಯಾವುದೇ ಗೊಂದಲಕ್ಕೆ ಆಸ್ಪದವಿಲ್ಲದಂತೆ ಮೇಲಿನ ಅಂಶಗಳನ್ನು ಪರಿಗಣಿಸಿ, 2022–23ನೇ ಸಾಲಿನ ನವೀಕರಣವನ್ನು ಹಮ್ಮಿಕೊಳ್ಳಲು ಸೂಚಿಸಿದೆ.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಗಳು:–**

1. ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.

ಮು.ತಿ.ನೋ.

3. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಕಳುಹಿಸುತ್ತಾ, ದಿನಪತ್ರಿಕೆಗಳಲ್ಲಿ ಪ್ರಕಟಿಸಲು ಸೂಚಿಸಿದೆ.
5. ವಿಶೇಷ ಆಯುಕ್ತರು (ಆರೋಗ್ಯ & ಮಾಹಿತಿ ತಂತ್ರಜ್ಞಾನ) ರವರ ಮಾಹಿತಿಗಾಗಿ ಕಳುಹಿಸಿದೆ.
6. ಪಾಲಿಕೆಯ ಎಲ್ಲಾ ವಲಯ ಆಯುಕ್ತರವರ ಮಾಹಿತಿಗಾಗಿ ಕಳುಹಿಸಿದೆ.
7. ಎಲ್ಲಾ ವಲಯದ ಜಂಟಿ / ಅಪರ ಆಯುಕ್ತರು ರವರ ಮಾಹಿತಿಗಾಗಿ ಕಳುಹಿಸಿದೆ.
8. ಉಪ ಆಯುಕ್ತರು (ಮಾಹಿತಿ ತಂತ್ರಜ್ಞಾನ) ರವರ ಮಾಹಿತಿಗಾಗಿ ಕಳುಹಿಸಿದೆ.
9. ತಾಂತ್ರಿಕ ಸಲಹೆಗಾರರಿಗೆ ಕಳುಹಿಸುತ್ತಾ ಆನ್‌ಲೈನ್‌ನಲ್ಲಿ ಅಳವಡಿಸಿಕೊಳ್ಳಲು ಸೂಚಿಸಿದೆ.
10. ಮುಖ್ಯ ಆರೋಗ್ಯಾಧಿಕಾರಿಗಳು (ಸಾ.ಆ) ಬಿ.ಬಿ.ಎಂ.ಪಿ ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
11. ಎಲ್ಲಾ ವಲಯ ಆರೋಗ್ಯಾಧಿಕಾರಿಗಳು / ಉಪ ಆರೋಗ್ಯಾಧಿಕಾರಿಗಳು / ಆರೋಗ್ಯ ವೈದ್ಯಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ / ಕಛೇರಿ ಪ್ರತಿ.